# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕಿನ ದೊಡ್ಡಕೌಲಂದೆ ಮತ್ತು ಇತರೆ 55 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಪುನಃಶ್ಚೇತನಗೊಳಿಸಿ / ಪುನರ್ ಸ್ಥಾಪಿಸುವ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:19.11.2020ರಂದು ನಡೆದ ರಾಜ್ಯ ತಾಂತ್ರಿಕ ಸಂಸ್ಥೆ(STA) ಸಭೆಯ ನಡವಳಿಗಳು.
2. ಮುಖ್ಯ ಇಂಜಿನಿಯರ್, ಗ್ರಾಕುನೀ&ನೈಇ ರವರ ಕಡತ ಸಂಖ್ಯೆ:ಗ್ರಾಕುನೀ& ನೈಇ/ಮು.ಇಂ./ತಾಂತ್ರಿಕ/301/2019.

----

**ಪೀಠಿಕೆ:**

ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ದೊಡ್ಡಕೌಲಂದೆ ಮತ್ತು ಇತರೆ 55 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು **ಪುನಃಶ್ಚೇತನಗೊಳಿಸಿ / ಪುನರ್ ಸ್ಥಾಪಿಸುವ** ಕಾಮಗಾರಿಯ ಅಂದಾಜು ಮೊತ್ತ **ರೂ.998.00ಲಕ್ಷ**ಗಳ ಪ್ರಸ್ತಾವನೆಗೆ ಮೇಲೆ ಓದಲಾದ(2)ರ ಕಡತದಲ್ಲಿ CE/RWSSD ರವರು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿದ್ದಾರೆ.

ಸದರಿ ಯೋಜನೆಯ ಕಾಮಗಾರಿಯನ್ನು 2020-21ನೇ ಸಾಲಿನ ಜಲ ಜೀವನ್ ಮಿಷನ್**(JJM) - (Bulk Water Supply of New MVS)** ನಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದ್ದು, ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮೈಸೂರು ಜಿಲ್ಲಾ ಪಂಚಾಯತಿ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ ಜಲ ಜೀವನ್ ಮಿಷನ್**(JJM)** ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಕುನೀ&ನೈಇ 81 ಗ್ರಾನೀಸ(4)2020 ಬೆಂಗಳೂರು, ದಿನಾಂಕ.27.11.2020**

ಪೀಠಿಕೆಯಲ್ಲಿನ ಪ್ರಸ್ತಾವನೆಯ ಹಿನ್ನೆಲೆಯಲ್ಲಿ, ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕಿನ ದೊಡ್ಡಕೌಲಂದೆ ಮತ್ತು ಇತರೆ 55 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು **ಪುನಃಶ್ಚೇತನಗೊಳಿಸಿ / ಪುನರ್ ಸ್ಥಾಪಿಸುವ** ಕಾಮಗಾರಿಯ ಅಂದಾಜು ಮೊತ್ತ **ರೂ.998.00ಲಕ್ಷ (ಒಂಬೈನೂರ ತೊಂಭತ್ತೆಂಟು ಲಕ್ಷ ರೂಪಾಯಿಗಳು ಮಾತ್ರ)** ಗಳನ್ನು ಜಲ ಜೀವನ ಮಿಷನ್**(JJM)** ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. **ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ಗುತ್ತಿಗೆದಾರರು ಪುನಃಶ್ಚೇತನ ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು.

(ಆ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಡೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2020-21ರ ಸಾಲಿನಲ್ಲಿ MISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು. ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು.

27/11/2020

(ಇ) ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಈ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ)(ಪ್ರ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಮೈಸೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಆಯುಕ್ತರು, RDW&SD, ಕಾವೇರಿ ಭವನ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
9. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು.
11. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ. ವೃತ್ತ ಕಛೇರಿ, ಮೈಸೂರು.
12. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
14. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
15. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&ನೈ. ವಿಭಾಗ, ಮೈಸೂರು
16. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
17. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
18. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
19. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.